ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.

ಸಂಖ್ಯೆ: ಪಪೂಶಿಇ/ದ್ವಿ.ಪಿ.ಪೂ.ಪ.ದಿ.ವಿ/13/2019-20 ದಿನಾಂಕ: 20.08.2020

## ಸು ತ್ತೋ ಲೆ

ವಿಷಯ: 2020ರ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗೆ ಪುನರಾವರ್ತಿತ ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಸಂದಾಯ ಮಾಡಲು ಕೊನೆಯ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ:
1. ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ 14/7/2020.
2. ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ 03/8/2020.
3. ಸಂಖ್ಯೆ:ಪಪೂಶಿಇ/ದ್ವಿ.ಪಿ.ಪೂ.ಪ/10/2019-20ದಿನಾಂಕ: 10.08.2020
4. ಪಪೂಶಿಇ/ದ್ವಿ.ಪಿ.ಪೂ.ಪ.ದಿ.ವಿ/12/2019-20 ದಿನಾಂಕ: 13.08.2020

* * * *

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಗಳನ್ವಯ 2020ರ ಪೂರಕ ಪರೀಕ್ಷೆಗೆ ಪುನರಾವರ್ತಿತ (Repeater) ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಸಂದಾಯ ಮಾಡಲು ಉಲ್ಲೇಖಿತ ಸುತ್ತೋಲೆಯಲ್ಲಿ 31/07/2020ರ ವರೆಗೆ ಅವಕಾಶ ನೀಡಲಾಗಿತ್ತು. ವಿದ್ಯಾರ್ಥಿಗಳು ಹಾಗೂ ಪೋಷಕರ ಮನವಿಯ ಮೇರೆಗೆ ದಿನಾಂಕವನ್ನು ಈ ಕೆಳಕಂಡತೆ ವಿಸ್ತರಿಸಿ ಆದೇಶಿಸಲಾಗಿತ್ತು

| ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ಹಾಗೂ ಕಾಲೇಜಿನವರು Online Portal ನಲ್ಲಿ update ಮಾಡಲು ಕಡೇ ದಿನಾಂಕ | ಕಾಲೇಜಿನವರು ಪರೀಕ್ಷಾ ಶುಲ್ಕವನ್ನು ಒಂದೇ ಕಂತಿನಲ್ಲಿ ಖಜಾನೆಗೆ ಸಂದಾಯ ಮಾಡಬೇಕಾದ ದಿನಾಂಕ | ಕಾಲೇಜಿನವರು ಪರೀಕ್ಷಾ ಅರ್ಜಿಗಳನ್ನು ಚಲನ್ ಸಹಿತ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ದಿನಾಂಕ |
|---|---|---|
| 05/08/2020 | 06/08/2020 | 07/08/2020 |

ಸದರಿ ಪರೀಕ್ಷೆಗೆ ಶುಲ್ಕ ಪಾವತಿಸುವ, ದಿನಾಂಕವನ್ನು ವಿದ್ಯಾರ್ಥಿಗಳು ಹಾಗೂ ಪೋಷಕರು ಕೇಂದ್ರ ಕಛೇರಿಗೆ ಸಲ್ಲಿಸಿರುವ ಮನವಿಯ ಮೇರೆಗೆ 11/08/2020 ರವರೆಗೆ ವಿಸ್ತರಿಸಿ ಆದೇಶಿಸಲಾಗಿತ್ತು. ಈ ಸಂಬಂಧ ಈ ಕೆಳಗಿನ ಪಟ್ಟಿಯನ್ವಯ ಕ್ರಮ ಕೈಗೊಳ್ಳಲು ತಿಳಿಸಿತ್ತು.

| ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ಹಾಗೂ ಕಾಲೇಜಿನವರು Online Portal ನಲ್ಲಿ update ಮಾಡಲು ಕಡೇ ದಿನಾಂಕ | ಕಾಲೇಜಿನವರು ಪರೀಕ್ಷಾ ಶುಲ್ಕವನ್ನು ಒಂದೇ ಕಂತಿನಲ್ಲಿ ಖಜಾನೆಗೆ ಸಂದಾಯ ಮಾಡಬೇಕಾದ ದಿನಾಂಕ | ಕಾಲೇಜಿನವರು ಪರೀಕ್ಷಾ ಅರ್ಜಿಗಳನ್ನು ಚಲನ್ ಸಹಿತ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ದಿನಾಂಕ |
|---|---|---|
| 11/08/2020 | 12/08/2020 | 12/08/2020 |

Scanned with CamScanner

ಪುನ: ವಿದ್ಯಾರ್ಥಿಗಳು ಮತ್ತು ಪೋಷಕರು ಕೇಂದ್ರ ಕಛೇರಿಗೆ ಸಲ್ಲಿಸಿರುವ ಮನವಿಯನ್ನು ಪರಿಗಣಿಸಿ ಪೂರಕ ಪರೀಕ್ಷೆ 2020ರ ಶುಲ್ಕ ಪಾವತಿಸುವ ದಿನಾಂಕವನ್ನು 14/08/2020ರ ವರೆಗೆ ವಿಸ್ತರಿಸಿ ಆದೇಶಿಸಲಾಗಿದೆ.

| ಕಾಲೇಜಿನಲ್ಲಿ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ಕಡೇ ದಿನಾಂಕ | ಕಾಲೇಜಿನವರು ಪರೀಕ್ಷಾ ಶುಲ್ಕವನ್ನು ಒಂದೇ ಕಂತಿನಲ್ಲಿ ಖಜಾನೆಗೆ ಸಂದಾಯ ಮಾಡಬೇಕಾದ ದಿನಾಂಕ | ಕಾಲೇಜಿನವರು ಪರೀಕ್ಷಾ ಅರ್ಜಿಗಳನ್ನು ಚಲನ್ ಸಹಿತ ಕೇಂದ್ರ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ದಿನಾಂಕ |
|---|---|---|
| 14/08/2020 | 17/08/2020 | 17/08/2020 |

ಮತ್ತೆ ವಿದ್ಯಾರ್ಥಿಗಳು ಮತ್ತು ಪೋಷಕರು ಕೇಂದ್ರ ಕಛೇರಿಗೆ ಸಲ್ಲಿಸಿರುವ ಮನವಿಯನ್ನು ಪರಿಗಣಿಸಿ ಪೂರಕ ಪರೀಕ್ಷೆ 2020ರ ಶುಲ್ಕ ಪಾವತಿಸುವ ದಿನಾಂಕವನ್ನು 21/08/2020ರ ವರೆಗೆ ವಿಸ್ತರಿಸಿ ಆದೇಶಿಸಲಾಗಿದೆ.

| ಕಾಲೇಜಿನಲ್ಲಿ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ಕಡೇ ದಿನಾಂಕ | ಕಾಲೇಜಿನವರು ಪರೀಕ್ಷಾ ಶುಲ್ಕವನ್ನು ಒಂದೇ ಕಂತಿನಲ್ಲಿ ಖಜಾನೆಗೆ ಸಂದಾಯ ಮಾಡಬೇಕಾದ ದಿನಾಂಕ | ಕಾಲೇಜಿನವರು ಪರೀಕ್ಷಾ ಅರ್ಜಿಗಳನ್ನು ಚಲನ್ ಸಹಿತ ಅಯಾ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ದಿನಾಂಕ |
|---|---|---|
| 21/08/2020 | 21/08/2020 | 21/08/2020 |

ಪ್ರಾಂಶುಪಾಲರು ವಿದ್ಯಾರ್ಥಿಗಳಿಂದ ಪರೀಕ್ಷಾ ಅರ್ಜಿಗಳನ್ನು ಕಾಲೇಜುವಾರು ಕ್ರೋಢೀಕೃತ ವಿದ್ಯಾರ್ಥಿಗಳ ಪಟ್ಟಿ, ಹಣ ಪಾವತಿಸಿರುವ ಮೂಲ ಚಲನ್ ಹಾಗೂ ಮುಚ್ಚಳಿಕೆ ಪತ್ರವನ್ನು ಖುದ್ದಾಗಿ ದಿನಾಂಕ 21/8/2020ರಂದು ಅಯಾ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಸಲ್ಲಿಸಲು ಸೂಚಿಸಿದೆ. ತಪ್ಪಿದಲ್ಲಿ ಸಂಬಂಧಿಸಿದ ಪ್ರಾಂಶುಪಾಲರನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು. ಜಿಲ್ಲಾ ಉಪನಿರ್ದೇಶಕರು ಕೇಂದ್ರ ಕಛೇರಿಗೆ ಸಲ್ಲಿಸ ಬೇಕಾದ ದಿನಾಂಕ 24/08/2020.

2020ರ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಯನ್ನು ನಡೆಸಲು ಸಮಯಾವಕಾಶ ಕಡಿಮೆ ಇರುವುದರಿಂದ ಹಾಗೂ 4ನೇ ಬಾರಿ ದಿನಾಂಕ ವಿಸ್ತರಿಸಿರುವುದರಿಂದ ಈ ನಂತರ ಯಾವುದೇ ಕಾರಣಕ್ಕೂ ಶುಲ್ಕ ಪಾವತಿಸಲು ದಿನಾಂಕವನ್ನು ವಿಸ್ತರಿಸಲಾಗುವುದಿಲ್ಲ.

ಮಾನ್ಯ ನಿರ್ದೇಶಕರಿಂದ ಅನುಮೋದಿಸಲ್ಪಟ್ಟಿದೆ.

ಉಪ ನಿರ್ದೇಶಕರು(ಪರೀಕ್ಷೆ)
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳು:

1. ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರಿಗೆ – ಮಾಹಿತಿಗಾಗಿ ಹಾಗೂ ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
2. ಪದವಿ ಪೂರ್ವ ಶಿಕ್ಷಣ ಬೋಧಿಸುವ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗೆ. (ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡಲು)
3. ಇಲಾಖಾ ಇ-ಆಡಳಿತ ಶಾಖೆ, (ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು).
4. ಕಛೇರಿ ಪ್ರತಿ.

Scanned with CamScanner